# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ 15ನೇ ಹಣಕಾಸು ಆಯೋಗದ ಮೊದಲನೇ ಕಂತಿನ ನಿರ್ಬಂಧಿತ ಅನುದಾನವನ್ನು 5954 ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ 300 ಜಿಪಸ 2022, ದಿನಾಂಕ:01-07-2022.
2. ಭಾರತ ಸರ್ಕಾರದ ವಿತ್ತ ಮಂತ್ರಾಲಯ, ವೆಚ್ಚ ಇಲಾಖೆ, ಆರ್ಥಿಕ ಆಯೋಗ ವಿಭಾಗದ ಪತ್ರ ಸಂ.ಎಫ್.15(4)ಎಫ್‌ಸಿ-XV/ಎಫ್‌ಸಿಡಿ/2020-25, ದಿನಾಂಕ:31-08-2022.
3. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ:FD 34 BGL 2022, ದಿನಾಂಕ:02-09-2022.
4. ಆರ್ಥಿಕ ಇಲಾಖೆಯ ಆ.ಆ.ಕೋ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 28 ಆಆಕೋ 2022, ದಿನಾಂಕ: 03-09-2022.

**ಪ್ರಸ್ತಾವನೆ:**

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2022-23ನೇ ಸಾಲಿಗೆ ಒಟ್ಟು ರೂ.246300.00ಲಕ್ಷಗಳ ಅನುದಾನವನ್ನು ಭಾರತ ಸರ್ಕಾರವು ನಿಗಧಿಪಡಿಸಿದ್ದು, ಶೇ.85ರಷ್ಟು ರೂ.209355.00ಲಕ್ಷಗಳನ್ನು ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಮೇಲೆ ಓದಲಾದ (2)ರ ಭಾರತ ಸರ್ಕಾರದ ಪತ್ರದನ್ವಯ 15ನೇ ಹಣಕಾಸು ಆಯೋಗದ 2022-23ನೇ ಸಾಲಿನ ನಿರ್ಬಂಧಿತ ಅನುದಾನದ ಮೊದಲನೇ ಕಂತು ರೂ.62806.50ಲಕ್ಷಗಳ ಅನುದಾನವನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ(3)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಹಾಗೂ ಮೇಲೆ ಓದಲಾದ (4)ರ ಅನಧಿಕೃತ ಟಿಪ್ಪಣಿಯನ್ವಯ 2022-23ನೇ ಸಾಲಿನ ನಿರ್ಬಂಧಿತ ಅನುದಾನದ ಮೊದಲನೇ ಕಂತು ರೂ.62806.50(ಅರವತ್ತೆರಡು ಸಾವಿರದ ಎಂಟು ನೂರ ಆರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

ಅದರಂತೆ, 2022-23ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತಿಗಳಿಗೆ ಲೆಕ್ಕ ಶೀರ್ಷಿಕೆ:2515-00-198-6-13ರಡಿ ಒದಗಿಸಲಾಗಿರುವ ರೂ.209355.00ಲಕ್ಷಗಳಲ್ಲಿ 15ನೇ ಹಣಕಾಸು ಆಯೋಗದ ನಿರ್ಬಂಧಿತ ಅನುದಾನದ ಮೊದಲನೇ ಕಂತು ರೂ.62806.50(ಅರವತ್ತೆರಡು ಸಾವಿರದ ಎಂಟು ನೂರ ಆರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಅನುಬಂಧ ಹಾಗೂ ಮೇಲೆ ಓದಲಾದ (1)ರ

ಮಾರ್ಗಸೂಚಿಯನ್ವಯ 5954 ಗ್ರಾಮ ಪಂಚಾಯತಿಗಳಿಗೆ ಖಜಾನೆ-2ನ BMS ಮೂಲಕ ಸಂಬಂಧಿಸಿದ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 401 ಜಿಪಸ 2022, ದಿನಾಂಕ:07-09-2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2022-23ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕ ಶೀರ್ಷಿಕೆ:2515-00-198-6-13ರಡಿ ಒದಗಿಸಲಾಗಿರುವ ರೂ.209355.00 ಲಕ್ಷಗಳಲ್ಲಿ 15ನೇ ಹಣಕಾಸು ಆಯೋಗದ ನಿರ್ಬಂಧಿತ ಅನುದಾನದ ಮೊದಲನೇ ಕಂತು ರೂ.62806.50 (ಅರವತ್ತೆರಡು ಸಾವಿರದ ಎಂಟು ನೂರ ಆರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಅನುಬಂಧದನ್ವಯ 5954 ಗ್ರಾಮ ಪಂಚಾಯತಿಗಳಿಗೆ ಖಜಾನೆ-2ನ BMS ಮೂಲಕ ಸಂಬಂಧಿಸಿದ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

M. M. 7/9/22

**(ಎಂ.ಎಂ.ರಾಜು)**

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

7/9/2022

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ಸಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ಸಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ಸಂ.5329) ಬೆಂಗಳೂರು.
4. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು

5. ನಿರ್ದೇಶಕರು(ಅಭಿವೃದ್ಧಿ), ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ – ಪತ್ರಿಕೆಯಲ್ಲಿ ಪ್ರಕಟಿಸಲು.
10. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
11. ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಹಿರಿಯ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ &ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು
8. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.